**<u>ದಿನಾಂಕ 21.03.2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.</u>**

**<u>ಮುಖ್ಯ ವಿಚಾರಣೆಃ ಅರ್ಜಿದಾರರ ಪರ ಮಾನ್ಯ ವಕೀಲರಿಂದ.</u>**

ನನ್ನ ಮುಖ್ಯ ವಿಚಾರಣಾ ಸಾಕ್ಷ್ಯವನ್ನು ಪ್ರಮಾಣ ಪತ್ರದ ರೂಪದಲ್ಲಿ ಸಲ್ಲಿಸಿದ್ದೇನೆ. ಅದರಲ್ಲಿರುವ ವಿಚಾರಗಳನ್ನು ನಾನೇ ಹೇಳಿ ಬರೆಯಿಸಿ ರುಜು ಮಾಡಿದ್ದು ಅದರಲ್ಲಿರುವ ವಿಚಾರಗಳು ಸತ್ಯವಾಗಿವೆ.

ಅಧಿಕಾರ ಪತ್ರವನ್ನು **ನಿಪಿ 27** ಎಂದು, ಕೇಸ್ ಶೀಟನ್ನು **ನಿಪಿ 28** ಎಂದು ಗುರುತಿಸಲಾಯಿತು.

**<u>ಪಾಟೀ ಸವಾಲುಃ 2ನೇ ಎದುರುದಾರರ ಪರ ಮಾನ್ಯ ವಕೀಲರಿಂದ.</u>**

ಗಾಯಾಳು ಬೇರೆ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದು ನಮ್ಮ ಆಸ್ಪತ್ರೆಗೆ ಬಂದರೋ, ನೇರ ಆಸ್ಪತ್ರೆಗೆ ಬಂದರೋ ಎಂಬ ಬಗ್ಗೆ ನನಗೆ ಮಾಹಿತಿ ಇಲ್ಲ. ಗಾಯಾಳುಗೆ ಸಂಬಂಧಿಸಿದಂತೆ ನನಗೆ ವಯಕ್ತಿಕ ಮಾಹಿತಿ ಇಲ್ಲ ಎಂದರೆ ಸರಿ. ಅರ್ಜಿದಾರರಿಗೆ ನೀಡಿದ ಚಿಕಿತ್ಸೆಯ ಬಗ್ಗೆ ನನಗೆ ಮಾಹಿತಿ ಇಲ್ಲ. ನಿಪಿ 28ರ ಬಗ್ಗೆ ನನಗೆ ವಯಕ್ತಿಕ ಮಾಹಿತಿ ಇಲ್ಲ ಎಂದರೆ ಸರಿ. ಅರ್ಜಿದಾರರಿಗೆ ಸಹಾಯ ಮಾಡುವ ಉದ್ದೇಶದಿಂದ ನಿಪಿ 28 ಅನ್ನು ಸೃಷ್ಟಿಸಿ ಹಾಜರುಪಡಿಸಿದ್ದೇನೆ ಎಂದರೆ ಸರಿಯಲ್ಲ. ನಮ್ಮ ಆಸ್ಪತ್ರೆಯಲ್ಲಿ ಎಂ.ಎಲ್.ಸಿ ಆಗಿರುವುದಿಲ್ಲ. ಅರ್ಜಿದಾರರಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಪ್ರಮಾಣ ಪತ್ರ ಸಲ್ಲಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲುಃ 1ನೇ ಎದುರುದಾರರ ಪರ ಮಾನ್ಯ ವಕೀಲರಿಂದ.</u>**

1ನೇ ಎದುರುದಾರರ ಪರ ಮಾನ್ಯ ವಕೀಲರು 2ನೇ ಎದುರುದಾರರು ಮಾಡಿದ ಪಾಟೀ ಸವಾಲನ್ನೇ ಅಳವಡಿಸಿಕೊಳ್ಳುವುದಾಗಿ ತಿಳಿಸಿರುತ್ತಾರೆ.

**(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ).**
**(ಓ.ಹೇ.ಕೇ.ಸ.ಇ.)**

**1ನೇ ಎಸ್‌ಸಿಜೆ ಮತ್ತು ಎಸಿಜೆಎಮ್**

**ಬೆಂಗಳೂರು**